# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಪಶ್ಚಿಮ ವಲಯ, ಶ್ರೀರಾಮಮಂದಿರ ಉಪವಿಭಾಗ

### ವಾರ್ಡ್ ನಂ.98 : ಪ್ರಕಾಶ್ ನಗರ

**ದಿನಾಂಕ: 09.08.2021 ರಂದು ಮಧ್ಯಾಹ್ನ 3.00 ಗಂಟೆಗೆ ಶ್ರೀ ಎಂ.ಬಿ.ನಾಗರಾಜು, ನೋಡಲ್ ಅಧಿಕಾರಿ, ವಾರ್ಡ್ 98 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಅಭಿಯಂತರರು, ವಾರ್ಡ್ 98ರ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

ಸಭೆಯಲ್ಲಿ ಹಾಜರಿದ್ದವರು:

| ಕ್ರಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ಎಂ.ಬಿ.ನಾಗರಾಜು | ನೋಡಲ್ ಅಧಿಕಾರಿ–ವಾರ್ಡ್ 98 |
| 2 | ಶ್ರೀ ಮಂಜುನಾಥ್ ಡಿ ಎಸ್. | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು–ವಾರ್ಡ್ 98 |
| 3 | ಡಾ.ಶೀಲಾ | ಆರೋಗ್ಯ ಅಧಿಕಾರಿ, PHC ಪ್ರಕಾಶ್ ನಗರ |
| 4 | ರಮೇಶ್ ಎಂ | ಕಂದಾಯ ವಸೂಲಿಗಾರರು |
| 5 | ಆರ್ ನರಸಿಂಹ | ಬಿ.ಡಬ್ಲ್ಯೂ.ಎಸ್.ಎಸ್,ಬಿ |
| 6 | ಭಾಸ್ಕರ್ | ಸ್ಥಳೀಯ ನಾಗರೀಕರ ಕಲ್ಯಾಣ ಸಂಘ |
| 7 | ಪ್ರಕಾಶ್ | ಕಿರಿಯ ಅಭಿಯಂತರರು, ಬೆಸ್ಕಾಂ |
| 8 | ವೆಂಕಟೇಶ್ | ಸ್ಥಳೀಯ ನಾಗರೀಕರ ಕಲ್ಯಾಣ ಸಂಘ |
| 9 | ಜೆ.ಶ್ರೀನಿವಾಸ್ | ಎನ್.ಜಿ.ಓ |
| 10 | ಸುನೀಲ್ | ಸ್ಥಳೀಯ ನಾಗರೀಕರ ಕಲ್ಯಾಣ ಸಂಘ |

:ನಡಾವಳಿಯ ವರದಿ:

ಸದಸ್ಯ ಕಾರ್ಯದರ್ಶಿಗಳಾದ ಶ್ರೀ ಮಂಜುನಾಥ್ ಡಿ.ಎಸ್ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್‌ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಮತ್ತು ವಾರ್ಡ್ ಕಮಿಟಿ ಸದಸ್ಯರಿಗೆ ಸ್ವಾಗತ ಕೋರಿದರು.

- **ಕೋವಿಡ್–19, ಸಾಂಕ್ರಾಮಿಕ ರೋಗದ ಬಗ್ಗೆ**
  - ಸಭೆಯಲ್ಲಿ 04/07/2021 ರಿಂದ 08/08/2021ರವರೆಗಿನ ಲಸಿಕಾಕರಣ ಹಾಗೂ ಕೋವಿಡ್ ತಪಾಸಣೆಗಾಗಿ ಸಂಬಂಧಿಸಿದ ವಿವರಗಳನ್ನು ಸಭೆಯಲ್ಲಿ ತಿಳಿಸಲಾಯಿತು.
  - ಶ್ರೀ ಎಂ.ಬಿ.ನಾಗರಾಜು, ನೋಡಲ್ ಅಧಿಕಾರಿರವರು ಮಾತನಾಡಿ ಕೋವಿಡ್ ಸೋಂಕು ವಾರ್ಡ್ ವ್ಯಾಪ್ತಿಯಲ್ಲಿ ಬೆರಳಣಿಕೆಯಲ್ಲಿ ಸೋಂಕು ಪತ್ತೆಯಾಗುತ್ತಿದ್ದು, ಇಳಿಕೆ ಕಾಣುತ್ತಿದ್ದರೂ ಸಹ ಮಾಸ್ಕ್ ಧರಿಸುವ ಹಾಗೂ ಸಾಮಾಜಿಕ ಅಂತರ ಕಾಯ್ದುಕೊಳ್ಳುವ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವಂತೆ ಸೂಚಿಸಿದರು ಹಾಗೂ ಸಾರ್ವಜನಿಕರಲ್ಲಿ ಲಸಿಕೆ ಹಾಕಿಸಿಕೊಳ್ಳುವ ಬಗ್ಗೆ ಹೆಚ್ಚಿನ ಪ್ರಚಾರ ಕೈಗೊಂಡು ಅರಿವು ಮೂಡಿಸುವಂತೆ ಸೂಚಿಸಿದರು.

- ಸದಸ್ಯರಾದ ಶ್ರೀ ವೆಂಕಟೇಶ್ ರವರು ಮಾತಾನಾಡಿ, ಪ್ರಕಾಶ್ ನಗರದಲ್ಲಿ ಸ್ಯಾನಿಟರಿ ತೊಂದರೆಯಿದ್ದು, ಪೈಪ್ ಲೇನ್ ದುರಸ್ಥಿಪಡಿಸುವಂತೆ ಕೋರಿದರು.

  ಈ ಬಗ್ಗೆ ಪ್ರತಿಕ್ರಿಯಿಸಿದ ನೋಡಲ್ ಅಧಿಕಾರಿರವರು, ಸಂಬಂಧಪಟ್ಟ ಬಿ,ಡಬ್ಲ್ಯೂ,ಎಸ್.ಎಸ್.ಬಿ ರವರಿಗೆ ಸೂಕ್ತ ಕ್ರಮ ಕೈಗೊಳ್ಳಲು ತಿಳಿಸಲಾಗುವುದೆಂದು ತಿಳಿಸಿದರು.
- ಸದಸ್ಯರಾದ ಶ್ರೀ ಸುನೀಲ್ ರವರು ಮಾತಾನಾಡಿ ವಾರ್ಡ್ ವ್ಯಾಪ್ತಿಯ 9ನೇ ಅಡ್ಡರಸ್ತೆ, 6ನೇ ಮುಖ್ಯರಸ್ತೆ, ನವರಂಗ್ ಬಾರ್ ಡೌನ್‌ನಲ್ಲಿರುವ ರಸ್ತೆಗಳಲ್ಲಿರುವ ಮರಗಳ ಕೊಂಬೆಗಳು ಬಾಗಿದ್ದು, ರಾತ್ರಿಯ ಸಮಯದಲ್ಲಿ ವಿದ್ಯುತ್ ದೀಪಗಳು ಮರೆಯಾಗಿ ರಸ್ತೆಗೆ ಬೆಳಕು ಬೀಳುತ್ತಿರುವುದಿಲ್ಲ. ಇದನ್ನು ಸರಿಪಡಿಸಬೇಕೆಂದು ಕೋರಿದರು.

  ಇದಕ್ಕೆ ಪ್ರತಿಕ್ರಿಯಿಸಿದ ನೋಡಲ್ ಅಧಿಕಾರಿರವರು, ಸಂಬಂಧಪಟ್ಟ ಅರಣ್ಯ ಇಲಾಖೆಯವರನ್ನು ಸಂಪರ್ಕಿಸಿ ಬಾಗಿರುವ ರೆಂಬೆಗಳನ್ನು ಸೂಚಿಸಲಾಗುವುದೆಂದು ತಿಳಿಸಿದರು.

<u>BBMP SAHAYA APP:</u>

- ಡಿ.ಎಸ್.ಮಂಜುನಾಥ್ ಸಹಾಯಕ ಅಭಿಯಂತರರು, ವಾರ್ಡ್ ನಂ.98 ಮಾತನಾಡಿ ನಮ್ಮ ಇಲಾಖೆಗೆ ಸಂಬಂಧಪಟ್ಟ ದೂರುಗಳಿಗೆ ಶೀಘ್ರಗತಿಯಲ್ಲಿ ಪರಿಹಾರಕ್ರಮ ಕೈಗೊಳ್ಳುತ್ತಿದ್ದು, ಯಾವುದೇ ಸಮಸ್ಯೆಗಳು ಬಾಕಿ ಇರುವುದಿಲ್ಲ ಎಂದು ತಿಳಿಸಿದರು.

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ಕೋವಿಡ್-19 ಸಾಂಕ್ರಾಮಿಕವನ್ನು ವಾರ್ಡ್ ಮಟ್ಟದಲ್ಲಿಯೇ ಪರಿಹರಿಸುವ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗಿ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

- ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಮಂಜುನಾಥ್ ಡಿ ಎಸ್ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಶ್ರೀ ಎಂ.ಬಿ.ನಾಗರಾಜು)
**ನೋಡಲ್ ಅಧಿಕಾರಿ ವಾರ್ಡ್-98**

**ಸದಸ್ಯ ಕಾರ್ಯದರ್ಶಿ-ವಾರ್ಡ್ 98 ಹಾಗೂ**
**ಸಹಾಯಕ ಅಭಿಯಂತರರು,**

ಪ್ರತಿಯನ್ನು:

1) ಮಾನ್ಯ ವಲಯ ಆಯುಕ್ತರು, ಪಶ್ಚಿಮ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
2) ಜಂಟಿ ಆಯುಕ್ತರು, ಪಶ್ಚಿಮ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಕಾರ್ಯಪಾಲಕ ಅಭಿಯಂತರರು (ರಾಜಾಜಿನಗರ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
4) ಸಹಾಯಕ ಕಾರ್ಯಪಾಲಕ ಅಭಿಯಂತರರು (ಶ್ರೀರಾಮಮಂದಿರ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.98 ರವರ ಮಾಹಿತಿಗಾಗಿ
6) ಸಹಾಯಕ ಅಭಿಯಂತರರು (ವಿದ್ಯುತ್ ಬೆಸ್ಕಾಂ) ರವರ ಮಾಹಿತಿಗಾಗಿ
7) ಸಹಾಯಕ ಅಭಿಯಂತರರು (ವಿದ್ಯುತ್ (ಬೀದಿದೀಪ) ಬಿಬಿಎಂಪಿ ರವರ ಮಾಹಿತಿಗಾಗಿ ಸೂಕ್ತ ಕ್ರಮಕ್ಕಾಗಿ
8) ಪೋಲೀಸ್ ಸಬ್ ಇನ್ಸ್‌ಪೆಕ್ಟರ್ ರಾಜಾಜಿನಗರ ಪೋಲೀಸ್ ಠಾಣೆ ರವರ ಮಾಹಿತಿಗಾಗಿ
9) ಕಛೇರಿ ಕಡತಕ್ಕೆ